ಆ) ಬಂದಿದ್ದಲ್ಲಿ, ಈ ಬಗ್ಗೆ ಕೈಗೊಂಡ ಕ್ರಮಗಳೇನು ,

ಇ) ಪ್ರಸಕ್ತ ವರ್ಷದಲ್ಲಿ ಈ ಕಾಮಗಾರಿಗಳಿಗೆ ಬಿಡುಗಡೆ ಮಾಡಿದ ಹಣವೆಷ್ಟು ?

ಶ್ರೀ ಬಿ ಎಸ್ ಯಡಿಯೂರಪ್ಪ (ಉಪ ಮುಖ್ಯಮಂತ್ರಿಗಳು ಹಾಗೂ ಸಣ್ಣ ನೀರಾವರಿ ಸಚಿವರು)

ಅ) ಬಂದಿದೆ

ಆ) ಕೊಂಗಣ ಏತ ನೀರಾವರಿ ಯೋಜನೆ ಅನುಷ್ಟಾನದ ಬಗ್ಗೆ ಪರಿಶೀಲಿಸಲಾಗಿದ್ದು, ಈ ಯೋಜನೆ ಆರ್ಥಿಕವಾಗಿ ಹಾಗೂ ತಾಂತ್ರಿಕವಾಗಿ ಫಲಪ್ರದವಾಗುವುದಿಲ್ಲವೆಂದು ತಿಳಿದು ಬಂದಿದೆ ಮೇಲ್ದಾರೆ ಏತ ನೀರಾವರಿ ಯೋಜನೆಗೆ ಸುಮಾರು 20 00 ಕೋಟಿ ರೂ ಗಳ ವೆಚ್ಚವಾಗಬಹುದೆಂದು ಅಂದಾಜಿಸಲಾಗಿದೆ ಈ ಯೋಜನೆ ಕಾವೇರಿ ಜಲಾನಯನದ ವ್ಯಾಪ್ತಿಯಲ್ಲಿ ಬರುವುದರಿಂದ, ಕಾವೇರಿ ನ್ಯಾಯಾಧೀಕರಣದ ಅಂತಿಮ ಆದೇಶದ ನಂತರವೇ ಈ ಯೋಜನೆಯನ್ನು ಅನುಷ್ಟಾನಗೊಳಿಸುವ ಬಗ್ಗೆ ಪರಿಶೀಲಿಸಬಹುದಾಗಿರುತ್ತದೆ

ಇ) ಯಾವುದೇ ಹಣ ಬಿಡುಗಡೆ ಮಾಡಿಲ್ಲ

40 (110) ಶ್ರೀ ಗಂಗಾಧರ್ ನಾಗೇಶ್ ಭಟ್ (ಕಾರವಾರ) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ,

ಅ) ಉತ್ತರ ಕನ್ನಡ ಜಿಲ್ಲೆಯ ಜೋಯಡಾ ತಾಲ್ಲೂಕಿನಲ್ಲಿ ಶಿಕ್ಷಕರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ,

ಆ) ಬಂದಿದ್ದಲ್ಲಿ, ಈ ಕೊರತೆಯನ್ನು ನೀಗಿಸಲು ಸರ್ಕಾರವು ಏನು ಕ್ರಮ ಕೈಗೊಳ್ಳುತ್ತಿದೆ ?

ಶ್ರೀ ಬಿ ಎಸ್ ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ) ಹೌದು

ಆ) ಸರ್ಕಾರಿ ಪ್ರಾಥಮಿಕ ಶಾಲೆ

2005–06ನೇ ಸಾಲಿನ ಪ್ರಾಥಮಿಕ ಶಾಲಾ ಶಿಕ್ಷಕರ ನೇಮಕಾತಿ ಪ್ರಕ್ರಿಯೆಯು ಮುಗಿದಿದ್ದು ನವೆಂಬರ್ 2006 ರಲ್ಲಿ ಉತ್ತರ ಕನ್ನಡ ಜಿಲ್ಲೆಗೆ 203 ಹುದ್ದೆಗಳನ್ನು ಹಂಚಲಾಗಿದೆ ಈ ಪೈಕಿ ಜೈಯಿಡಾ ತಾಲ್ಲೂಕಿಗೆ 29 ಅಭ್ಯರ್ಥಿಗಳನ್ನು ನೇಮಕಾತಿ ಮಾಡಲಾಗಿದೆ

2006–07ನೇ ಸಾಲಿನ ಪ್ರಾಥಮಿಕ ಶಾಲಾ ಶಿಕ್ಷಕರ ನೇಮಕಾತಿಗೆ ದಿ 11 01 2007 ರಂದು ಅಧಿಸೂಚನೆ ಹೊರಡಿಸಲಾಗಿದೆ ಇದರಲ್ಲಿ ಉತ್ತರ ಕನ್ನಡ ಜಿಲ್ಲೆಗೆ 208 ಹುದ್ದೆಗಳನ್ನು ಹಂಚಲಾಗಿದೆ ಈ ಪೈಕಿ ಜೋಯಿಡಾ ತಾಲ್ಲೂಕಿಗೆ 53 ಶಿಕ್ಷಕರನ್ನು ನೇಮಕಾತಿ ಪ್ರಕ್ರಿಯೆ ಮೂಲಕ ಶೀಘ್ರದಲ್ಲಿಯೇ ನೇಮಕಾತಿ ಮಾಡಿಕೊಳ್ಳಲಾಗುವುದು

ಸರ್ಕಾರಿ ಪ್ರೌಢ ಶಾಲೆ

2006–07ನೇ ಸಾಲಿನಲ್ಲಿ ಸರ್ಕಾರಿ ಪ್ರೌಢ ಶಾಲೆಗಳಿಗೆ ರಾಜ್ಯದಲ್ಲಿ ಒಟ್ಟು ಖಾಲಿ ಇರುವ 5984 ಹುದ್ದೆಗಳನ್ನು ಭರ್ತಿ ಮಾಡಲು ದಿ 25 09 2006 ರಂದು ಅಧಿಸೂಚನೆಯನ್ನು ಹೊರಡಿಸಲಾಗಿತ್ತು ಈ ಸಂಬಂಧ ದಿ 25/26 1 2006 ರಂದು ಸಂಯುಕ್ತ ಸ್ಪರ್ಧಾತ್ಮಕ ಪರೀಕ್ಷೆಯನ್ನು ನಹ ನಡೆಸಲಾಗಿದ್ದು, ನೇಮಕಾತಿಯ ಪ್ರಕ್ರಿಯೆ ಚಾಲ್ತಿಯಲ್ಲಿದೆ ಶೀಘ್ರದಲ್ಲಿಯೇ ಜೈಯಿಡಾ ತಾಲ್ಲೂಕಿನಲ್ಲಿ ಖಾಲಿ ಇರುವ ಪ್ರೌಢಶಾಲಾ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡಲಾಗುವುದು

41 (113) ಶ್ರೀ ಗಂಗಾಧರ್ ನಾಗೇಶ್ ಭಟ್ (ಕಾರವಾರ) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ,

ಅ) ಉತ್ತರ ಕನ್ನಡ ಜಿಲ್ಲೆಯ ಜೋಯಿಡಾ ತಾಲ್ಲೂಕಿನಲ್ಲಿ ಆಯುರ್ವೇದ ವಿಶ್ವವಿದ್ಯಾಲಯ ಸ್ಥಾಪನೆ ಮಾಡಲು ಯಾವಾಗ ಕ್ರಮ ಕೈಗೊಳ್ಳುವುದು

ಆ) ಈ ಬಗ್ಗೆ ಸರ್ಕಾರದಲ್ಲಿ ಪ್ರಸ್ತಾವನೆ ಇದೆಯೇ , (ವಿವರ ನೀಡುವುದು) ?

ಡಾ ವಿ ಎಸ್ ಆಚಾರ್ಯ (ವೈದ್ಯಕೀಯ ಶಿಕ್ಷಣ ಸಚಿವರು)

ಅ) ಸರ್ಕಾರದ ಮುಂದೆ ಯಾವುದೇ ಪ್ರಸ್ತಾವನೆ ಇರುವುದಿಲ್ಲ

ಆ) ಅನ್ವಯಿಸುವುದಿಲ್ಲ

42 (89) ಶ್ರೀ ಗುರುಪಾದಪ್ಪ ನಾಗಮಾರಪಲ್ಲಿ (ಔರಾದ್) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ,

ಅ) ರಾಜ್ಯ ಸರ್ಕಾರವು ಶಾಲೆಗಳಲ್ಲಿ ಒಂದನೇ ತರಗತಿಯಿಂದ ಇಂಗ್ಲೀಷ್ ವಿಷಯವನ್ನು ಕಡ್ಡಾಯಗೊಳಿಸುವ ಬಗ್ಗೆ ಚಿಂತನೆ ನಡೆಸಿರುವುದು ನಿಜವಲ್ಲವೇ